# ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ.,ಬೈಂದೂರು

ಒ.ಎಸ್.ನಂಬ್ರ: **653/2023**                    ಪಿ.ಡಬ್ಲ್ಯೂ : **1**

| | | |
|---|---|---|
| ಸಾಕ್ಷಿದಾರರ ಹೆಸರು | : | ಏಲ್ಸಿ |
| ಗಂಡನ ಹೆಸರು | : | ದಿ. ಅಬ್ರಾಹಂ |
| ಪ್ರಾಯ | : | 66 ವರ್ಷ |
| ವಾಸ | : | ಶಿರೂರು, ಬೈಂದೂರು |

ದಿನಾಂಕಃ 02-08-2024 ರಂದು ಸಾಕ್ಷಿಯನ್ನು ಕರೆಯಿಸಿ ವಿಧಿಬದ್ಧವಾಗಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ವಕೀಲರಾದ ಶ್ರೀ ಎಲ್.ಆರ್.ಎಮ್.ವಕೀಲರಿಂದ

ನಾನು ನನ್ನ ಪ್ರಮಾಣ ಪತ್ರವನ್ನು ಈ ದಿವಸ ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದನ್ನು ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಗಿದೆ. ಅದರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಕೇಳಿಕೊಳ್ಳುತ್ತೇನೆ.

1. ದಾವಾ ಎ ಶೆಡ್ಯೂಲ್ ಸ್ವತ್ತಿನ ಆರ್.ಟಿ.ಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

2. ದಿಃ 15-05-2023 ರಂದು ವಕೀಲರ ಮೂಲಕ ಪ್ರತಿವಾದಿಯರಿಗೆ ನೀಡಿದ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3. ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದುಅದನ್ನು ನಿಪಿ-3 ರಿಂದ ನಿಪಿ 5 ಎಂದು ಗುರುತಿಸಲಾಯಿತು.

4. ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ರಿಂದ ನಿಪಿ-8 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸ.ಇದೆ

ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಬೈಂದೂರು